Kerala Gazette No. 31 dated 4th August 2020.

**PART I** **Section iii**

# ಕೇರಳ ಸರಕಾರ

ಕಾನೂನು (ಶಾಸನ ರಚನೆ-ಡಿ) ಇಲಾಖೆ

## ಅಧಿಸೂಚನೆ

*2018 ಏಪ್ರಿಲ್ 7,*

ನಂಬ್ರ 23963/ಲೆಗ್. ಡಿ2/2017/ಕಾನೂನು. *ತಿರುವನಂತಪುರಂ,* *1193 ಮೀನ 24/*

*1940 ಚೈತ್ರ 17.*

ಕೇರಳ ರಾಜ್ಯ ವಿಧಾನಸಭೆಯ ಈ ಕೆಳಗಿನ ಅಧಿನಿಯಮವನ್ನು ಸಾರ್ವಜನಿಕರ ತಿಳಿವಳಿಕೆಗಾಗಿ ಈ ಮೂಲಕ ಪ್ರಕಟಿಸಲಾಗುವುದು. ವಿಧಾನಸಭೆಯು ಮಂಜೂರು ಮಾಡಿದಂತಹ ಮಸೂದೆಗೆ 2018 ಏಪ್ರಿಲ್ 7ನೇ ದಿನಾಂಕದಂದು ರಾಜ್ಯಪಾಲರ ಅನುಮತಿ ಲಭಿಸಿತು.

ರಾಜ್ಯಪಾಲರ ಆಜ್ಞಾಪ್ರಕಾರ,

**ಬಿ. ಜಿ. ಹರೀಂದ್ರನಾಥ್,**

*ಕಾನೂನು ಕಾರ್ಯದರ್ಶಿ.*

## 2018ರ 10ನೇ ಅಧಿನಿಯಮ

## 2018ರ ಕೇರಳ ರಸ್ತೆ ಸುರಕ್ಷಾ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ

2007ರ ಕೇರಳ ರಸ್ತೆ ಸುರಕ್ಷಾ ಪ್ರಾಧಿಕಾರ ಅಧಿನಿಯಮವನ್ನು ತಿದ್ದುಪಡಿ ಮಾಡುವುದಕ್ಕಿರುವ

ಒಂದು

ಅಧಿನಿಯಮ

ಪೀಠಿಕೆ.—2007ರ ಕೇರಳ ರಸ್ತೆ ಸುರಕ್ಷಾ ಪ್ರಾಧಿಕಾರ ಅಧಿನಿಯಮ (2007ರ 8)ವನ್ನು ಇನ್ನು ಮುಂದಿನ ಅಗತ್ಯಗಳಿಗಾಗಿ ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದಲೂ;

ಭಾರತ ಗಣರಾಜ್ಯದ ಅರುವತ್ತೊಂಭತ್ತನೇ ವರ್ಷದಲ್ಲಿ ಈ ಕೆಳಗಿನಂತೆ ಅಧಿನಿಯಮ ಮಾಡಲಾಗುವುದು:—

1. ಸಣ್ಣ ಹೆಸರು ಮತ್ತು ಪ್ರಾರಂಭ.—(1) ಈ ಅಧಿನಿಯಮವನ್ನು 2018ರ ಕೇರಳ ರಸ್ತೆ ಸುರಕ್ಷಾ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ ಎಂದು ಕರೆಯಬಹುದು.

(2) ಇದು 2017 ನವಂಬರ್ 21ನೇ ದಿನಾಂಕದಂದು ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

2. 9ನೇ ವಿಭಾಗಕ್ಕಿರುವ ತಿದ್ದುಪಡಿ.—2007ರ ಕೇರಳ ರಸ್ತೆ ಸುರಕ್ಷಾ ಪ್ರಾಧಿಕಾರ ಅಧಿನಿಯಮ (2007ರ 8) (ಇನ್ನು ಮುಂದೆ ಪ್ರಧಾನ ಅಧಿನಿಯಮವೆಂದು ಉಲ್ಲೇಖಿಸಲ್ಪಡುವುದು)ದ 9ನೇ ವಿಭಾಗದ ಬದಲು, ಈ ಕೆಳಗಿನ ವಿಭಾಗವನ್ನು ಸೇರಿಸತಕ್ಕದ್ದು, ಅದೇನೆಂದರೆ:—

"9. ರಸ್ತೆ ಸುರಕ್ಷಾ ಆಯುಕ್ತರು.—ಸರಕಾರಕ್ಕೆ ಈ ಅಧಿನಿಯಮದ ಉದ್ದೇಶಕ್ಕಾಗಿ ಅಖಿಲ ಭಾರತ ಸೇವೆಯಲ್ಲಿರುವ ಸರಕಾರಿ ಅಧಿಕಾರಿಯವರ, ಪೋಲೀಸ್ ಇನ್ಸ್‌ಪೆಕ್ಟರ್ ಜನರಲ್‌ರವರ ಅಥವಾ ಚೀಫ್ ಫೋರಸ್ಟ್ ಕನ್ಸರ್ವೇಟರ್‌ವರ ದರ್ಜೆಗಿಂತ ಕೆಳಗಲ್ಲದ ಒಬ್ಬ ಅಧಿಕಾರಿಯವರನ್ನು ಪೂರ್ಣ ಸಮಯ ರಸ್ತೆ ಸುರಕ್ಷಾ ಆಯುಕ್ತರಾಗಿ ಡೆಪ್ಯೂಟೇಶನ್ ವ್ಯವಸ್ಥೆಯಲ್ಲಿ ನೇಮಿಸಬಹುದಾಗಿದೆ.".

3. ರದ್ಧತಿ ಮತ್ತು ರಕ್ಷಣೆ.—(1) 2018ರ ಕೇರಳ ರಸ್ತೆ ಸುರಕ್ಷಾ ಪ್ರಾಧಿಕಾರ (ತಿದ್ದುಪಡಿ) ಅಧ್ಯಾದೇಶ (2018ರ 5)ವು ಈ ಮೂಲಕ ರದ್ದುಗೊಂಡಿರುವುದು.

(2) ಅಂತಹ ರದ್ಧತಿಯಲ್ಲಿ ಏನೇ ಒಳಗೊಂಡಿದ್ದರೂ, ಪ್ರಸ್ತುತ ಅಧ್ಯಾದೇಶದ ಪ್ರಕಾರ ತಿದ್ದುಪಡಿಮಾಡಲ್ಪಟ್ಟ ಪ್ರಧಾನ ಅಧಿನಿಯಮದ ಪ್ರಕಾರ ಮಾಡಿದ ಅಥವಾ ಮಾಡಿರುವುದಾಗಿ ಭಾವಿಸಲ್ಪಡುವ ಯಾವುದೇ ಕಾರ್ಯ ಅಥವಾ ಕೈಗೊಂಡ ಅಥವಾ ಕೈಗೊಂಡಿರುವುದಾಗಿ ಭಾವಿಸಲ್ಪಡುವ ಯಾವುದೇ ಕ್ರಮವು ಈ ಅಧಿನಿಯಮದ ಪ್ರಕಾರ ತಿದ್ದುಪಡಿಮಾಡಲ್ಪಟ್ಟ ಪ್ರಧಾನ ಅಧಿನಿಯಮದ ಪ್ರಕಾರ ಮಾಡಿರುವುದಾಗಿ ಅಥವಾ ಕೈಗೊಂಡಿರುವುದಾಗಿ ಭಾವಿಸತಕ್ಕದ್ದು.